ಕರ್ನಾಟಕ ಸರ್ಕಾರ
**ಜಿಲ್ಲಾ ಪಂಚಾಯತ್, ಕೋಲಾರ**

ಇ-ಮೇಲ್: ceozpkol@gmail.com ದೂರವಾಣಿ ಸಂಖ್ಯೆ: 08152-240649

ಸಂಖ್ಯೆ:ಜಿಪಂಕೋ:ಸಿಡಿಪಿ(5):ಗ್ರಂಥಾಲಯ:ಸಿಆರ್.230:2016-17 ದಿನಾಂಕ:20.10.2023

**ಜ್ಞಾಪನ**

ವಿಷಯ: ಕೋಲಾರ ಜಿಲ್ಲೆಯಲ್ಲಿ ವಿವಿಧ ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಗ್ರಾಮ ಪಂಚಾಯಿತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರದ ಮೇಲ್ವಿಚಾರಕರ ಹುದ್ದೆಗೆ ಅರ್ಜಿ ಆಹ್ವಾನಿಸಿರುವ ಬಗ್ಗೆ ದಿನ ಪತ್ರಿಕೆಗಳಲ್ಲಿ ಪ್ರಕಟಿಸುವ ಬಗ್ಗೆ.

ಉಲ್ಲೇಖ: ಈ ಕಛೇರಿಯ ಅಧಿಸೂಚನೆಯ ಸಮ ಸಂಖ್ಯೆ ದಿ:20.10.2023.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ಈ ಕಛೇರಿಯ ಅಧಿಸೂಚನೆಯನ್ನು ಈ ಪತ್ರದೊಂದಿಗೆ ಲಗತ್ತಿಸಿ ಕಳುಹಿಸುತ್ತಾ, ಸದರಿ ಅಧಿಸೂಚನೆಯಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಸೇವಾ) (ನಿಯಮಗಳು 2022 ರನ್ವಯ ಕೋಲಾರ ಜಿಲ್ಲೆಯ ಈ ಕೆಳಕಂಡ ಗ್ರಾಮ ಪಂಚಾಯಿತಿ ಗ್ರಂಥಾಲಯಗಳಲ್ಲಿ ಖಾಲಿ ಇರುವ ಗ್ರಂಥಾಲಯ ಮೇಲ್ವಿಚಾರಕರ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ದಿನಾಂಕ:20.10.2023 ರಿಂದ 19.11.2023 ರವರೆಗೆ ಆಹ್ವಾನಿಸಲಾಗಿರುತ್ತದೆ.

ಆದ್ದರಿಂದ ಸದರಿ ಅಧಿಸೂಚನೆಯನ್ನು ತಮ್ಮ ಕಛೇರಿಯ ಸೂಚನಾ ಫಲಕಗಳಲ್ಲಿ ಪ್ರಕಟಿಸಲು ಹಾಗೂ ಸದರಿ ಅಧಿಸೂಚನೆಯಲ್ಲಿ ತಿಳಿಸಿರುವ ಎಲ್ಲಾ ಅಂಶಗಳಂತೆ ಈ ಪತ್ರದೊಂದಿಗೆ ಲಗತ್ತಿಸಿರುವ ಅರ್ಜಿಯಲ್ಲಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ನಿಗಧಿತ ಅವಧಿಯೊಳಗೆ ಸಂಬಂಧಪಟ್ಟ ಗ್ರಾಮ ಪಂಚಾಯಿತಿಗಳಲ್ಲಿ ಸ್ವೀಕರಿಸಿ ನಿಗಧಿತ ಅವಧಿ ಮುಗಿದ ನಂತರ ಅರ್ಜಿಗಳನ್ನು ಪರಿಶೀಲಿಸಿ ಕ್ರಮ ಬದ್ಧವಾಗಿ ಸಲ್ಲಿಸಿರುವ ಅರ್ಜಿಗಳನ್ನು ಮಾತ್ರ ಈ ಕಛೇರಿಗೆ ಸಲ್ಲಿಸಲು ಹಾಗೂ ಕ್ರಮಬದ್ಧವಾಗಿ ಸಲ್ಲಿಸದೇ ಇರುವ ಅರ್ಜಿಗಳನ್ನು ಗ್ರಾಮ ಪಂಚಾಯಿತಿ ಹಂತದಲ್ಲಿಯೇ ತಿರಸ್ಕರಿಸಿ ಸಂಬಂಧಪಟ್ಟ ಅರ್ಜಿದಾರರಿಗೆ ಸೂಕ್ತ ಕಾರಣಗಳೊಂದಿಗೆ ಹಿಂಬರಹ ನೀಡಿ ಪ್ರತಿಯನ್ನು ಈ ಕಛೇರಿಗೆ ಸಲ್ಲಿಸಲು ಸೂಚಿಸಿದೆ.

| ಕ್ರ.ಸಂ | ತಾಲ್ಲೂಕಿನ ಹೆಸರು | ಗ್ರಾಮ ಪಂಚಾಯಿತಿ ಹೆಸರು | ಗ್ರಂಥಾಲಯದ ಕೇಂದ್ರ ಹೆಸರು | ರೋಸ್ಟರ್ ಬಿಂದು | ಮೀಸಲಾತಿ | ಸಮತಳ |
|---|---|---|---|---|---|---|
| 01 | ಮಾಲೂರು | ಟೇಕಲ್ | ಟೇಕಲ್ | 01 | ಪ.ಜಾತಿ | ಇತರೆ |
| 02 | ಮುಳಬಾಗಿಲು | ಸೊನ್ನವಾಡಿ | ಸೊನ್ನವಾಡಿ | 02 | ಸಾ.ಅ | ಇತರೆ |

| | | | | | | |
|---|---|---|---|---|---|---|
| 03 | ಮುಳಬಾಗಿಲು | ತಾಯಲೂರು | ತಾಯಲೂರು | 03 | ಪ.ಪಂಗಡ | ಇತರೆ |
| 04 | ಮಾಲೂರು | ಮಡಿವಾಳ | ಚೊಕ್ಕಂಡಹಳ್ಳಿ | 04 | ಸಾ.ಅ | ಮಹಿಳೆ |
| 05 | ಕೋಲಾರ | ಅಣ್ಣಿಹಳ್ಳಿ | ಮಣಿಘಟ್ಟ | 05 | ಪ್ರವರ್ಗ-1 | ಇತರೆ |

ಉಪ ಕಾರ್ಯದರ್ಶಿ
ಜಿಲ್ಲಾ ಪಂಚಾಯತ್, ಕೋಲಾರ ಹಾಗೂ
ಸದಸ್ಯ ಕಾರ್ಯದರ್ಶಿ ಗ್ರಾಮ ಪಂಚಾಯಿತಿ
ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರದ
ಮೇಲ್ವಿಚಾರಕರ ಆಯ್ಕೆ ಸಮಿತಿ,
ಕೋಲಾರ.

ರವರಿಗೆ,

1. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಮಾಲೂರು, ಮುಳಬಾಗಿಲು, ಕೋಲಾರ.
2. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಟೇಕಲ್ /ಮಡಿವಾಳ ಗ್ರಾಮ ಪಂಚಾಯಿತಿ, ಮಾಲೂರು ತಾಲ್ಲೂಕು.
3. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಸೊನ್ನವಾಡಿ/ತಾಯಲೂರು ಗ್ರಾಮ ಪಂಚಾಯಿತಿ,ಮುಳಬಾಗಿಲು ತಾಲ್ಲೂಕು.
4. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅಣ್ಣಿಹಳ್ಳಿ ಗ್ರಾಮ ಪಂಚಾಯಿತಿ, ಕೋಲಾರ ತಾಲ್ಲೂಕು.

ಪ್ರತಿಯನ್ನು:-

1. ಮಾನ್ಯ ಜಿಲ್ಲಾಧಿಕಾರಿಗಳು, ಕೋಲಾರ ಜಿಲ್ಲೆ, ಕೋಲಾರರವರ ಮಾಹಿತಿಗಾಗಿ ಹಾಗೂ ಈ ಪತ್ರದೊಂದಿಗೆ ಲಗತ್ತಿಸಿರುವ ಅಧಿಸೂಚನೆಯನ್ನು ತಮ್ಮ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
2. ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳುರವರ ಮಾಹಿತಿಗಾಗಿ ಹಾಗೂ ಈ ಪತ್ರದೊಂದಿಗೆ ಲಗತ್ತಿಸಿರುವ ಅಧಿಸೂಚನೆಯನ್ನು ತಮ್ಮ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
3. ಜಿಲ್ಲೆಯ 149 ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಮಾಹಿತಿಗಾಗಿ ಹಾಗೂ ಈ ಪತ್ರದೊಂದಿಗೆ ಲಗತ್ತಿಸಿರುವ ಅಧಿಸೂಚನೆಯನ್ನು ತಮ್ಮ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸಿದೆ.
4. ಕಛೇರಿ ಪ್ರತಿ.

# ಕೋಲಾರ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಗ್ರಾಮ ಪಂಚಾಯಿತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರದ ಮೇಲ್ವಿಚಾರಕರ ಹುದ್ದೆಗೆ ನೇಮಕಾತಿ ಅರ್ಜಿ ನಮೂನೆ.

ಗ್ರಾಮ ಪಂಚಾಯಿತಿ ಹೆಸರು:

ತಾಲ್ಲೂಕು:

ಜಿಲ್ಲೆ:

ಇತ್ತೀಚಿನ ಭಾವಚಿತ್ರದ ಪಾಸ್ ಪೋರ್ಟ್ ಅಳತೆ ಲಗತ್ತಿಸುವುದು.

ನಿಗದಿಪಡಿಸಿದ ಮೀಸಲಾತಿ:

ಕೋಲಾರ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ಗ್ರಾಮ ಪಂಚಾಯಿತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರದ ಮೇಲ್ವಿಚಾರಕರ ಹುದ್ದೆಗೆ ನೇಮಕಾತಿ ಈ ಕೆಳಕಂಡ ಮಾಹಿತಿ ಹಾಗೂ ಅಗತ್ಯ ದಾಖಲಾತಿಯೊಂದಿಗೆ ನನ್ನ ಅರ್ಜಿಯನ್ನುಸಲ್ಲಿಸುತ್ತಿದ್ದೇನೆ.

| | |
|---|---|
| ಅಭ್ಯರ್ಥಿಯ ಹೆಸರು<br>(ಎಸ್.ಎಸ್.ಎಲ್.ಸಿ ಅಂಕ ಪಟ್ಟಿಯಲ್ಲಿರುವಂತೆ) | |
| ತಂದೆಯ/ಗಂಡನ ಹೆಸರು | |
| ಜನ್ಮ ದಿನಾಂಕ<br>(ಎಸ್.ಎಸ್.ಎಲ್.ಸಿ ಅಂಕ ಪಟ್ಟಿಯಲ್ಲಿರುವಂತೆ)<br>ಪ್ರಮಾಣ ಪತ್ರವನ್ನು ಲಗತ್ತಿಸುವುದು. | |
| ಲಿಂಗ | |
| ಜಾತಿ/ವರ್ಗ ನಮೂದಿಸುವುದು<br>(ಪ್ರಮಾಣ ಪತ್ರವನ್ನು ಲಗತ್ತಿಸುವುದು) | |
| ವಿವಾಹಿತ/ಅವಿವಾಹಿತ/ವಿಧವೆ | |
| ಅರ್ಜಿ ಸಲ್ಲಿಸಿದ ಹುದ್ದೆಯ ಹೆಸರು ಅರ್ಜಿ ಸಲ್ಲಿಸಿದ ಗ್ರಾಮ ಪಂಚಾಯಿತಿಯ ಹೆಸರು ಹಾಗೂ ತಾಲ್ಲೂಕು. | |
| ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಾಸಿಸುವ ಬಗ್ಗೆ ತಹಶೀಲ್ದಾರರವರಿಂದ ಪಡೆದ ವಾಸಸ್ಥಳ ಪ್ರಮಾಣ ಪತ್ರ ಲಗತ್ತಿಸುವುದು. | |
| ಅಭ್ಯರ್ಥಿಯ ಖಾಯಂ ವಿಳಾಸ<br>(ಆಧಾರ್ ಕಾರ್ಡ್/ಚುನಾವಣಾ ಗುರುತಿನ ಚೀಟಿ ಲಗತ್ತಿಸುವುದು.) | |
| ದೂರವಾಣಿ/ಮೊಬೈಲ್ ಸಂಖ್ಯೆ | |
| ಆಧಾರ್ ಕಾರ್ಡ್ ಸಂಖ್ಯೆ | |
| ಸರ್ಟಿಫಿಕೇಷನ್ ಕೋರ್ಸ್ ಇನ್ ಲೈಬ್ರರಿ ಸೈನ್ಸ್ ನಲ್ಲಿ ಉತ್ತೀರ್ಣರಾಗಿರುವ ಪ್ರಮಾಣ ಪತ್ರ ಲಗತ್ತಿಸುವುದು. | |
| ದ್ವಿತೀಯ ಪದವಿ ಪೂರ್ವ ಪರೀಕ್ಷೆ (ಪಿ.ಯು.ಸಿ)<br>(ಪ್ರಮಾಣ ಪತ್ರವನ್ನು ಲಗತ್ತಿಸುವುದು) | |

| | | | |
|---|---|---|---|
| | ಪಿ.ಯು.ಸಿ/ತತ್ಸಮಾನ ವಿದ್ಯಾರ್ಹತೆಯಲ್ಲಿ ನಿಗಧಿಪಡಿಸಿದ ಒಟ್ಟು ಅಂಕ | ಪಿ.ಯು.ಸಿ/ ತತ್ಸಮಾನ ವಿದ್ಯಾರ್ಹತೆಯಲ್ಲಿ ಗಳಿಸಿದ ಅಂಕ | ಶೇಕಡ% |
| | | | |
| ಅಂಗವಿಕಲ ಅಭ್ಯರ್ಥಿಯು (ಹೌದು/ಇಲ್ಲ) ಜಿಲ್ಲಾ ಸರ್ಜನ್ ರವರಿಂದ ಪಡೆದ ಪ್ರಮಾಣ ಪತ್ರ ಮತ್ತು ಯು.ಡಿ.ಐ.ಡಿ ಕಾರ್ಡ್ ಅನ್ನು ಲಗತ್ತಿಸುವುದು. | | | |
| ಕನ್ನಡ ಮಾಧ್ಯಮದ ಅಭ್ಯರ್ಥಿಯು (ಹೌದು/ಇಲ್ಲ) (1 ರಿಂದ 10ನೇ ತರಗತಿ ವ್ಯಾಸಂಗ ಪ್ರಮಾಣ ಪತ್ರವನ್ನು ಮುಖ್ಯೋಪಾಧ್ಯಾಯರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲುರುಜು ಮಾಡಿದ ಪ್ರಮಾಣ ಪತ್ರವನ್ನು ಲಗತ್ತಿಸುವುದು) | | | |
| ಗಣಕಯಂತ್ರ ಪ್ರಮಾಣ ಪತ್ರ (ಕನಿಷ್ಠ ಮೂರು ತಿಂಗಳು) ಲಗತ್ತಿಸುವುದು. | | | |
| ಯೋಜನಾ ನಿರಾಶ್ರಿತರು (ಹೌದು/ಇಲ್ಲ) (ಸರ್ಕಾರ ಆದೇಶ ಸಂಖ್ಯೆ:ಸಿಆಸುಇ:23:ಸೇನೆನಿ:99: ದಿನಾಂಕ:23.11.2000 ರನ್ವಯ ಯೋಜನೆಗಳಿಂದ ನಿರಾಶ್ರಿರತರಾದ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರ್ ರವರಿಂದ ನಿಗಧಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಸಲ್ಲಿಸುವುದು) | | | |
| ಮಾಜಿ ಸೈನಿಕರು (ಹೌದು/ಇಲ್ಲ) ಪ್ರಮಾಣ ಪತ್ರವನ್ನು ಲಗತ್ತಿಸುವುದು. | | | |
| ತೃತೀಯ ಲಿಂಗ (ಹೌದು/ಇಲ್ಲ) (ಜಿಲ್ಲಾ ಮ್ಯಾಜಿಸ್ಟ್ರೇಟ್ ರವರಿಂದ ಪ್ರಮಾಣ ಪತ್ರವನ್ನು ನಿಗಧಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಲಗತ್ತಿಸುವುದು. | | | |

ಸೂಚನೆ:- * ಅಭ್ಯರ್ಥಿಯು ಅರ್ಜಿ ಭರ್ತಿ ಮಾಡುವ ಮೊದಲು ಈ ಅರ್ಜಿಯೊಂದಿಗೆ ಲಗತ್ತಿಸಿರುವ ಜಿಲ್ಲಾ ಪಂಚಾಯತ್, ಕೋಲಾರ ಕಛೇರಿಯಿಂದ ಹೊರಡಿಸಿರುವ ಅಧಿಸೂಚನೆಯಲ್ಲಿನ ಎಲ್ಲಾ ಸೂಚನೆಗಳನ್ನು ಕಡ್ಡಾಯವಾಗಿ ಓದಿಕೊಳ್ಳತಕ್ಕದ್ದು. ನಂತರ ಅರ್ಜಿ ಭರ್ತಿ ಮಾಡಿ ಎಲ್ಲಾ ದಾಖಲೆಗಳೊಂದಿಗೆ ಅರ್ಜಿಯನ್ನು ಸಂಬಂಧಪಟ್ಟ ಗ್ರಾಮ ಪಂಚಾಯಿತಿಗೆ ಸಲ್ಲಿಸುವುದು. ತಪ್ಪಿದ್ದಲ್ಲಿ ಅರ್ಜಿಯನ್ನು ತಿರಸ್ಕರಿಸಲಾಗುವುದೆಂದು ತಿಳಿಯತಕ್ಕದ್ದು ಹಾಗೂ ಎಲ್ಲಾ ದಾಖಲೆಗಳನ್ನು ಗೆಜೆಟೆಡ್ ಅಧಿಕಾರಿಗಳಿಂದ ದೃಢೀಕರಿಸಿ, ಸಲ್ಲಿಸಬೇಕು.

* ಅರ್ಜಿಯನ್ನು ಅಭ್ಯರ್ಥಿಯು ಸ್ವತಃ ತುಂಬಿ ಸಲ್ಲಿಸಬೇಕು.
* ಗ್ರಾಮ ಪಂಚಾಯಿತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರದ ಮೇಲ್ವಿಚಾರಕರ ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಸಂಬಂಧಪಟ್ಟ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನಿವಾಸಿಯಾಗಿರತಕ್ಕದ್ದು.
* ಈ ಮೇಲಿನಂತೆ ನಮೂಧಿಸಿರುವ ಎಲ್ಲಾ ವಿವರಗಳು ಸರಿಯಾಗಿದೆಯೆಂದು ಪ್ರಮಾಣೀಕರಿಸಿರುತ್ತೇನೆ.

ದಿನಾಂಕ:

ಸ್ಥಳ: ಅಭ್ಯರ್ಥಿಯ ಸಹಿ ಮತ್ತು ಹೆಸರು/-

ಕರ್ನಾಟಕ ಸರ್ಕಾರ

# ಜಿಲ್ಲಾ ಪಂಚಾಯತ್, ಕೋಲಾರ

ಇ-ಮೇಲ್: ceozpkol@gmail.com ದೂರವಾಣಿ ಸಂಖ್ಯೆ: 08152-240649

ಸಂಖ್ಯೆ:ಜಿಪಂಕೋ:ಸಿಡಿಪಿ(5):ಗ್ರಂಥಾಲಯ:ಸಿಆರ್.230:2016-17 ದಿನಾಂಕ:20.10.2023

## ಅಧಿಸೂಚನೆ

1. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್(ಗ್ರಾಮ ಪಂಚಾಯಿತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಸೇವಾ) (ನಿಯಮಗಳು 2022 ರನ್ವಯ ಕೋಲಾರ ಜಿಲ್ಲೆಯ ಈ ಕೆಳಕಂಡ ಗ್ರಾಮ ಪಂಚಾಯಿತಿ ಗ್ರಂಥಾಲಯಗಳಲ್ಲಿ ಖಾಲಿ ಇರುವ ಗ್ರಂಥಾಲಯ ಮೇಲ್ವೀಚಾರಕರ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ.

| ಇಲಾಖೆಯ ಹೆಸರು | ಹುದ್ದೆಯ ಪದನಾಮ | ಹುದ್ದೆಯ ಸಂಖ್ಯೆ |
|---|---|---|
| ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಜಿಲ್ಲಾ ಪಂಚಾಯತ್, ಕೋಲಾರ. | ಗ್ರಾಮ ಪಂಚಾಯಿತಿ ಗ್ರಂಥಾಲಯ ಮೇಲ್ವಿಚಾರಕರು | 05 |

2. **ಸ್ವೀಕೃತಿ ಕಾಲಮಿತಿ :**

| | |
|---|---|
| ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಪ್ರಾರಂಭಿಕ ದಿನಾಂಕ | ***20-10-2023*** |
| ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | ***19-11-2023*** |

ವಿಶೇಷ ಸೂಚನೆ:-

- ಗ್ರಾಮ ಪಂಚಾಯಿತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರದ ಮೇಲ್ವಿಚಾರಕರ ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಸಂಬಂಧಪಟ್ಟ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನಿವಾಸಿಯಾಗಿರತಕ್ಕದ್ದು. ಪರಂತು ಸಂಬಂಧಪಟ್ಟ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನಿವಾಸಿಯ ಲಭ್ಯತೆ ಇಲ್ಲದೇ ಇದ್ದಲ್ಲಿ ಆಯಾ ತಾಲ್ಲೂಕು ಪಂಚಾಯಿತಿ ವ್ಯಾಪ್ತಿಯಲ್ಲಿನ ಬೇರೆ ಗ್ರಾಮ ಪಂಚಾಯಿತಿಯ ಅಭ್ಯರ್ಥಿಗಳನ್ನು ಆಯ್ಕೆ ಪರಿಗಣಿಸಲಾಗುವುದು.
- ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮೊದಲು ಜಿಲ್ಲಾ ಪಂಚಾಯತ್ ಕೋಲಾರ ಕಛೇರಿಯಿಂದ ಹೊರಡಿಸಿರುವ ಅಧಿಸೂಚನೆಯನ್ನು ಓದಿ ಅರ್ಥೈಸಿಕೊಂಡು ಆ ನಂತರವೇ ತಮಗೆ ಅನ್ವಯವಾಗುವ ವಿವರಗಳನ್ನು ಭರ್ತಿ ಮಾಡತಕ್ಕದ್ದು.
- ಒಮ್ಮೆ ಅರ್ಜಿ ಸಲ್ಲಿಸಿದ ನಂತರ ಅರ್ಜಿಯಲ್ಲಿ ವಿವರಗಳನ್ನು ತಿದ್ದುಪಡಿ/ಸೇರ್ಪಡೆ ಮಾಡುವಂತೆ ನೀಡುವ ಯಾವುದೇ ಮನವಿಗಳನ್ನು ತಿರಸ್ಕರಿಸಲಾಗುವುದು.
- ನಿಯಮಾನುಸಾರ ಅರ್ಜಿಯೊಂದಿಗೆ ಸಲ್ಲಿಸುವ ಲಗತ್ತುಗಳ ಆಧಾರದ ಮೇಲೆ ಮಾತ್ರವೇ ದಾಖಲೆಗಳ ಪರಿಶೀಲನೆ ಮಾಡಲಾಗುವುದರಿಂದ ವಯೋಮಿತಿ, ವಿದ್ಯಾರ್ಹತೆಗೆ ಸಂಬಂಧಿಸಿದ ಪ್ರಮಾಣ ಪತ್ರಗಳನ್ನು ಹಾಗೂ ಅರ್ಜಿಯಲ್ಲಿ ಕೋರಿರುವ ಎಲ್ಲಾ ಮೀಸಲಾತಿ ಪ್ರಮಾಣ ಪತ್ರ/ಇತರೆ ಪ್ರಮಾಣ ಪತ್ರಗಳನ್ನು

ಅಭ್ಯರ್ಥಿಯ ಹೆಸರಿನಲ್ಲಿಯೇ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಅಧಿಸೂಚನೆಯ ಅನುಬಂಧದಲ್ಲಿ ಸೂಚಿಸಿರುವ ನಮೂನೆಗಳಲ್ಲಿಯೇ ಕಡ್ಡಾಯವಾಗಿ ಪಡೆದಿಟ್ಟುಕೊಂಡು ಸದರಿ ದಾಖಲೆಗಳನ್ನು ಅರ್ಜಿಯೊಂದಿಗೆ ಸಲ್ಲಿಸತಕ್ಕದ್ದು. (ದಾಖಲೆಗಳು ಸ್ಪಷ್ಟವಾಗಿರುಬೇಕು) ತಪ್ಪಿದ್ದಲ್ಲಿ ಅವರ ಮೀಸಲಾತಿ/ಅಭ್ಯರ್ಥಿತ್ವವನ್ನು ತಿರಸ್ಕರಿಸಲಾಗುವುದು.

- ಅರ್ಜಿ ಸಲ್ಲಿಸುವ ಸಮಯದಲ್ಲಿ, ಮೀಸಲಾತಿಯನ್ನು ಕೋರದೆ ತದನಂತರದಲ್ಲಿ ಮೀಸಲಾತಿಯನ್ನು ಪರಿಗಣಿಸುವಂತೆ ಕೋರಿ ಸಲ್ಲಿಸುವ ಮನವಿ/ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.
- 2.1ಅರ್ಜಿಗಳನ್ನು ಭರ್ತಿ ಮಾಡಿ ಭಾವಚಿತ್ರ/ಸಹಿ /ವಯೋಮಿತಿ/ ವಿದ್ಯಾರ್ಹತೆ ಹಾಗೂ ಕೋರಿದ ಮೀಸಲಾತಿಗೆ ಸಂಬಂಧಿಸಿದ ಎಲ್ಲಾ ದಾಖಲೆಗಳನ್ನು ಅರ್ಜಿಯೊಂದಿಗೆ ಸಲ್ಲಿಸುವುದು.

**3) ಅರ್ಜಿ ಸಲ್ಲಿಸುವ ಹಂತಗಳು/ ಅರ್ಜಿ ಸಲ್ಲಿಸುವ ಪ್ರಕ್ರಿಯೆ**

ಅಭ್ಯರ್ಥಿಯು ಅರ್ಜಿ ಭರ್ತಿಮಾಡಿ ಸಲ್ಲಿಸಿದ ಮಾತ್ರಕ್ಕೆ ಅಭ್ಯರ್ಥಿಗಳು ಅಧಿಸೂಚನೆಯಲ್ಲಿನ ಎಲ್ಲಾ ಷರತ್ತುಗಳನ್ನು ಪೂರೈಸಿರುತ್ತಾರೆ ಎಂದಲ್ಲ ತದನಂತರದಲ್ಲಿ ಅರ್ಜಿಗಳನ್ನು ಪರಿಶೀಲನೆಗೆ ಒಳಪಡಿಸಲಾಗುವುದು ಹಾಗೂ ಯಾವುದೇ ಹಂತದಲ್ಲಿ ನ್ಯೂನತೆಗಳು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಈ ಅರ್ಜಿ ಸಲ್ಲಿಸುವ ಪ್ರಕ್ರಿಯೆಯು ಒಂದು ಬಾರಿಯಾಗಿದ್ದು, ಅತೀ ಜಾಗರೂಕತೆಯಿಂದ ಎಲ್ಲಾ ಮಾಹಿತಿಯನ್ನು ಭರ್ತಿ ಮಾಡಬೇಕಾಗಿದೆ, ಅಭ್ಯರ್ಥಿಗಳು ಸೂಚನೆಗಳನ್ನು ಹಂತಹಂತವಾಗಿ ಓದಿಕೊಳ್ಳತಕ್ಕದ್ದು, ಎಲ್ಲಾ ಸೂಚನೆಗಳನ್ನು ಓದಿದ ನಂತರವೇ ಅರ್ಜಿಯನ್ನು ಭರ್ತಿಮಾಡತಕ್ಕದು.

1. ಅಭ್ಯರ್ಥಿಗಳು ಸಂಬಂಧಪಟ್ಟ ಗ್ರಾಮ ಪಂಚಾಯಿತಿಗೆ ಅರ್ಜಿ ಸಲ್ಲಿಸಬೇಕು, ಇದರ ಹೊರತಾಗಿ ಯಾವುದೇ ಇತರ ಮೂಲಗಳಿಂದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.
2. ಅರ್ಜಿಯ ಅಂತಿಮ ಸಲ್ಲಿಕೆಗೆ ಮೊದಲು ಅರ್ಜಿಯಲ್ಲಿನ ಎಲ್ಲಾ ಸಂಬಂಧಿತ ಕ್ಷೇತ್ರಗಳನ್ನು ಸರಿಯಾಗಿ ಭರ್ತಿ ಮಾಡಲಾಗಿದೆಯೇ ಎಂದು ಖಚಿತಪಡಿಸಿಕೊಳ್ಳುವುದು, ಏಕೆಂದರೆ ನಿರ್ದಿಷ್ಟ ಹುದ್ದೆಗೆ ಅರ್ಜಿ ಸಲ್ಲಿಸಿದ ನಂತರ ಬದಲಾವಣೆಗೆ ಅವಕಾಶವಿರುವುದಿಲ್ಲ.

3.1) ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡುವ ಮೊದಲು ಅಧಿಸೂಚನೆಯಲ್ಲಿ ನೀಡಿರುವ ಅರ್ಜಿ ಭರ್ತಿ ಮಾಡುವ ಕುರಿತು ಸೂಚನೆಗಳು, ಅರ್ಹತಾ ಷರತ್ತುಗಳನ್ನು ಓದಿಕೊಳ್ಳತಕ್ಕದ್ದು, ನೇಮಕಾತಿ ಪ್ರಾಧಿಕಾರವು ದೃಢೀಕರಿಸಿ ನೀಡಿರುವ ಹುದ್ದೆಗಳ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು:-

| | | | |
|---|---|---|---|
| ಸಾ.ಅ | ಸಾಮಾನ್ಯ ಅರ್ಹತೆ | GM | General Merit |
| ಪ.ಜಾ | ಪರಿಶಿಷ್ಟ ಜಾತಿ | SC | Scheduled Caste |
| ಪ.ಪಂ | ಪರಿಶಿಷ್ಟ ಪಂಗಡ | ST | Scheduled Tribe |
| ಪ್ರ-1 | ಪ್ರವರ್ಗ-1 | Cat-1 | Category - I |
| 2ಎ | ಪ್ರವರ್ಗ-2ಎ | 2A | Category - 2A |
| 2ಬಿ | ಪ್ರವರ್ಗ-2ಬಿ | 2B | Category - 2B |

| | | | |
|---|---|---|---|
| 3ಎ | ಪ್ರವರ್ಗ-3ಎ | 3A | Category - 3A |
| 3ಬಿ | ಪ್ರವರ್ಗ-3ಬಿ | 3B | Category - 3B |
| ಮಾ.ಸೈ | ಮಾಜಿ ಸೈನಿಕ | Ex-MP | Ex-Military Person |
| ಗ್ರಾಮೀಣ | ಗ್ರಾಮೀಣ ಅಭ್ಯರ್ಥಿ | Rural | Rural Candidate |
| ಕ.ಮಾ.ಅ | ಕನ್ನಡ ಮಾಧ್ಯಮ ಅಭ್ಯರ್ಥಿ | KMS | Kannada Medium Student |
| ಅಂ.ವಿ | ಅಂಗವಿಕಲ ಅಭ್ಯರ್ಥಿ | PH | Physically Handicapped |
| ಯೋ.ನಿ.ಅ | ಯೋಜನೆ ನಿರಾಶ್ರಿತ ಅಭ್ಯರ್ಥಿ | PDP | Project Displaced Person |
| ಉ.ಮೂ.ವೃ | ಉಳಿಕೆ ಮೂಲ ವೃಂದ | RPC | Residual Parent Cadre |
| ಹೈ.ಕ | ಹೈದ್ರಾಬಾದ್-ಕರ್ನಾಟಕ | HK | Hyderabad Karnataka |
| ತೃ.ಲಿ | ತೃತೀಯ ಲಿಂಗ | TG | Transgender |

4. ಅರ್ಹತಾ ಷರತ್ತುಗಳು:-

| | |
|---|---|
| ಅ) | ಭಾರತೀಯ ನಾಗರೀಕರಾಗಿರತಕ್ಕದ್ದು. |
| ಆ) | ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿಯಿರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ. |
| ಇ) | ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು |
| ಈ) | ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ಜಿಲ್ಲಾ ಪಂಚಾಯತ್ ಕಾಯ್ದಿರಿಸಿಕೊಂಡಿದೆ ಮತ್ತು ಜಿಲ್ಲಾ ಪಂಚಾಯತ್ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ, |

ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

5. ಆಯ್ಕೆ ವಿಧಾನ: - (1) ಶೈಕ್ಷಣಿಕ ಅರ್ಹತೆಯಲ್ಲಿನ ಮೆರಿಟ್ ಮತ್ತು ರೋಸ್ಟರ್ ಆಧಾರದ ಮೇಲೆ ಅಭ್ಯರ್ಥಿಗಳ ಆಯ್ಕೆಯನ್ನು ಮಾಡತಕ್ಕದ್ದು ಒಂದು ವೇಳೆ ಇಬ್ಬರು ಅಥವಾ ಹೆಚ್ಚಿನ ಅಭ್ಯರ್ಥಿಗಳು ಸಮಾನವಾದ ಅಂಕಗಳನ್ನು/ಮೆರಿಟ್ ಅನ್ನು ಹೊಂದಿದ್ದಲ್ಲಿ ವಯಸ್ಸಿನಲ್ಲಿ ಹಿರಿಯರಾದವರನ್ನು ಆಯ್ಕೆ ಮಾಡತಕ್ಕದ್ದು, ಅದರಂತೆ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗುವುದು.

(2) ಆಯ್ಕೆ ಸಮಿತಿಯು ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರದ ಮೇಲ್ವಿಚಾರಕರ ಹುದ್ದೆಗೆ ಸಂಬಂಧಿಸಿದಂತೆ ಸರ್ಟಿಫಿಕೇಷನ್ ಕೋರ್ಸ್ ಇನ್ ಲೈಬ್ರರಿ ಸೈನ್ಸ್ ಪದವಿ ಪಡೆದಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದಲ್ಲಿ ಪಿ.ಯು.ಸಿ. ಪರೀಕ್ಷೆಯಲ್ಲಿ ಅಭ್ಯರ್ಥಿಯುಗೊಳಿಸಿದ ಅಂಕಗಳನ್ನಾಧರಿಸಿ ಅಧಿಸೂಚಿಸಿದ ಖಾಲಿ ಕೇಂದ್ರವಾರು ಆಯ್ಕೆ ಪಟ್ಟಿಯನ್ನು ತಯಾರಿಸಲಾಗುವುದು. ಒಂದು ವೇಳೆ ಇಬ್ಬರು ಅಥವಾ ಹೆಚ್ಚಿನ ಅಭ್ಯರ್ಥಿಗಳನ್ನು ಸಮಾನವಾದ

ಅಂಕಗಳನ್ನು/ಮೆರಿಟ್‌ನ್ನು ಹೊಂದಿದ್ದಲ್ಲಿ ವಯಸ್ಸಿನಲ್ಲಿ ಹಿರಿಯರಾದವರನ್ನು ಆಯ್ಕೆ ಮಾಡಲಾಗುವುದು ಮತ್ತು ಅದರಂತೆ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗುವುದು.

(3) ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಆಯಾ ಗ್ರಾಮ ಪಂಚಾಯಿತಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗುವುದು. ಅದರಂತೆ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಸಂಬಂಧಿಸಿದಂತೆ ಆಕ್ಷೇಪಣೆ/ಸಲಹೆಗಾಗಿ 15 ದಿನಗಳ ಕಾಲಾವಕಾಶವನ್ನು ನೀಡಲಾಗುವುದು. ಆಕ್ಷೇಪಣೆ/ಸಲಹೆಯನ್ನು ಪರಿಶೀಲಿಸಿ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗುವುದು.

**6. ಶೈಕ್ಷಣಿಕ ವಿದ್ಯಾರ್ಹತೆ ಮತ್ತು ವಯೋಮಿತಿ:-**

**6 (1) ಶೈಕ್ಷಣಿಕ ವಿದ್ಯಾರ್ಹತೆ:-** ಅರ್ಜಿಗಳನ್ನು ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅನುಸೂಚಿಯಲ್ಲಿ ಆಯಾ ಹುದ್ದೆಗಳ ಮುಂದೆ ಸೂಚಿಸಿರುವ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಹೊಂದಿರಲೇಬೇಕು. ನಿಗಧಿಪಡಿಸಿರುವ ವಿದ್ಯಾರ್ಹತೆಯನ್ನು ಹೊಂದದೆ ಹೆಚ್ಚಿನ ವಿದ್ಯಾರ್ಹತೆಯನ್ನು ಹೊಂದಿದ್ದರೂ ಸಹ ಪರಿಗಣಿಸಲಾಗುವುದಿಲ್ಲ.

**6 (2) ವಯೋಮಿತಿ:-** ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅನುಸೂಚಿಯಲ್ಲಿ ಆಯಾ ಹುದ್ದೆಗಳ ಮುಂದೆ ನಮೂದಿಸಿರುವ ಕನಿಷ್ಠ ವಯೋಮಿತಿಯನ್ನು ಹೊಂದಿರಬೇಕು ಹಾಗೂ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು.

**ಅನುಸೂಚಿ**

| | |
|---|---|
| ಇಲಾಖೆಯ ಹೆಸರು/ಹುದ್ದೆಯ ಪದನಾಮ ಹುದ್ದೆಗಳ ಸಂಖ್ಯೆ | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಜಿಲ್ಲಾ ಪಂಚಾಯತ್, ಕೋಲಾರ, ಗ್ರಾಮ ಪಂಚಾಯಿತಿ ಗ್ರಂಥಾಲಯ ಮೇಲ್ವಿಚಾರಕರು 05 ಹುದ್ದೆಗಳು |
| ಗೌರವ ಸಂಭಾವನೆ | ಕಾರ್ಮಿಕ ಇಲಾಖೆಯಿಂದ ಆಗಿಂದಾಗ್ಗೆ ನಿಗಧಿಪಡಿಸಿರುವ ಕನಿಷ್ಠ ವೇತನ |
| ಹುದ್ದೆಗೆ ನಿಗದಿಪಡಿಸಲಾದ ವಿದ್ಯಾರ್ಹತೆ | ದ್ವಿತೀಯ ಪಿ.ಯು.ಸಿ/ ಸರ್ಟಿಫಿಕೇಷನ್ ಕೋರ್ಸ್ ಇನ್ ಲೈಬ್ರರಿ ಸೈನ್ಸ್, ಮಾನ್ಯತೆ ಪಡೆದಿರುವ ಸಂಸ್ಥೆಗಳಿಂದ 03 ತಿಂಗಳ ಕಂಪ್ಯೂಟರ್ ಕೋರ್ಸಿನ ಪ್ರಮಾಣ ಪತ್ರಗಳು. |
| ವಯೋಮಿತಿ, ವಯಸ್ಸು. ವರ್ಷಗಳಲ್ಲಿ.. | ಕನಿಷ್ಠ-18 ವರ್ಷ<br>ಗರಿಷ್ಠ - ಸಾಮಾನ್ಯ ಅರ್ಹತೆ-35 ವರ್ಷಗಳು,<br>ಪ್ರವರ್ಗ 2(ಎ), 2(ಬಿ), 3(ಎ), 3(ಬಿ)-38 ವರ್ಷಗಳು<br>ಪ.ಜಾ/ಪ.ಪಂ/ಪ್ರವರ್ಗ1- 40 ವರ್ಷಗಳು |

**ಕೋಲಾರ ಜಿಲ್ಲೆಯ ಗ್ರಾಮ ಪಂಚಾಯಿತಿ ಗ್ರಂಥಾಲಯ ಮೇಲ್ವಿಚಾರಕರ ವೃಂದದ 05 ಹುದ್ದೆಗಳ ವರ್ಗೀಕರಣ**

**1ನೇ ವೃತ್ತದ 01ನೇ ಬಿಂದುವಿನಿಂದ 05 ನೇ ಬಿಂದುವಿನವರೆಗೆ**

| ಮೀಸಲಾತಿ | ಇತರೆ | ಮಹಿಳೆ | ಗ್ರಾಮೀಣ | ಮಾ.ಸೈ | ಕ.ಮಾ.ಅ | ಅಂ.ವಿ | ಯೋ.ನಿ.ಅ | ತೃ.ಲಿಂಗಿ | ಒಟ್ಟು |
|---|---|---|---|---|---|---|---|---|---|
| **ಪ.ಜಾ** | **1** | - | - | - | - | - | - | - | **1** |
| **ಪ.ಪಂ** | **1** | - | - | - | - | - | - | - | **1** |
| **ಪ್ರ.2(ಎ)** | - | - | - | - | - | - | - | - | **0** |

| | | | | | | | | | |
|---|---|---|---|---|---|---|---|---|---|
| ಪ್ರ.2(ಬಿ) | - | - | - | - | - | - | - | - | 0 |
| ಪ್ರ.3(ಎ) | - | - | - | - | - | - | - | - | 0 |
| ಪ್ರ.3(ಬಿ) | - | - | - | - | - | - | - | - | 0 |
| ಪ್ರವರ್ಗ-1 | 1 | - | - | - | - | - | - | - | 1 |
| ಸಾ.ಅ | 1 | 1 | - | - | - | - | - | - | 2 |
| ಒಟ್ಟು | 4 | 1 | 0 | 0 | 0 | 0 | 0 | 0 | 5 |

**ಕೋಲಾರ ಜಿಲ್ಲೆಯಲ್ಲಿ ಖಾಲಿ ಇರುವ ಗ್ರಾಮ ಪಂಚಾಯಿತಿಗಳ ಗ್ರಂಥಾಲಯ ಮೇಲ್ವಿಚಾರಕರ ಹುದ್ದೆಗಳಿಗೆ ರೋಸ್ಟರ್ ನಿಯಮಗಳಂತೆ ಮೀಸಲಾತಿ ನಿಗಧಿಪಡಿಸಿರುವ ಬಗ್ಗೆ.**

| ಕ್ರ.ಸಂ | ತಾಲ್ಲೂಕಿನ ಹೆಸರು | ಗ್ರಾಮ ಪಂಚಾಯಿತಿ ಹೆಸರು | ಗ್ರಂಥಾಲಯದ ಕೇಂದ್ರ ಹೆಸರು | ರೋಸ್ಟರ್ ಬಿಂದು | ಮೀಸಲಾತಿ | ಸಮತಳ |
|---|---|---|---|---|---|---|
| 01 | ಮಾಲೂರು | ಟೇಕಲ್ | ಟೇಕಲ್ | 01 | ಪ.ಜಾತಿ | ಇತರೆ |
| 02 | ಮುಳಬಾಗಿಲು | ಸೊನ್ನವಾಡಿ | ಸೊನ್ನವಾಡಿ | 02 | ಸಾ.ಅ | ಇತರೆ |
| 03 | ಮುಳಬಾಗಿಲು | ತಾಯಲೂರು | ತಾಯಲೂರು | 03 | ಪ.ಪಂಗಡ | ಇತರೆ |
| 04 | ಮಾಲೂರು | ಮಡಿವಾಳ | ಚೊಕ್ಕಂಡಹಳ್ಳಿ | 04 | ಸಾ.ಅ | ಮಹಿಳೆ |
| 05 | ಕೋಲಾರ | ಅಣ್ಣಿಹಳ್ಳಿ | ಮಣಿಘಟ್ಟ | 05 | ಪ್ರವರ್ಗ-1 | ಇತರೆ |

6(3) ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮ 1977ರಲ್ಲಿ ನಿರ್ದಿಷ್ಟಪಡಿಸಿರುವಂತೆ ಈ ಕೆಳಗಿನ ಸಂದರ್ಭಗಳಲ್ಲಿ ಸದರಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು,

| | | |
|---|---|---|
| (ಅ) | ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳಿಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ ಅಭ್ಯರ್ಥಿಗಳಿಗೆ | ಸೇವೆ ಸಲ್ಲಿಸಿರುವಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು |
| (ಆ) | ಮಾಜಿ ಸೈನಿಕನಾಗಿದ್ದಲ್ಲಿ | ಸೇವೆ ಸಲ್ಲಿಸಿರುವಷ್ಟು ವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು |
| (ಇ) | National Cadet Corps ನಲ್ಲಿ ಪೂರ್ಣ ಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಗಳಿಗೆ | ಕೆಡೆಟ್ ಪರಿವೀಕ್ಷಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು |

| | | |
|---|---|---|
| (ಈ) | ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮಸಮೂಹ ಪರಿಶೀಲಕನಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಅಭ್ಯರ್ಥಿಗಳಿಗೆ | ಗ್ರಾಮ ಸಮೂಹ ಪರಿಶೀಲಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು |
| (ಉ) | ಅಂಗವಿಕಲ ಅಭ್ಯರ್ಥಿಗಳಿಗೆ | 10 ವರ್ಷಗಳು |
| (ಊ) | ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದರೆ ಅಥವಾ ಹಿಂದೆ ಹೊಂದಿದ್ದ ಅಭ್ಯರ್ಥಿಗಳಿಗೆ | ಸೇವೆ ಸಲ್ಲಿಸಿರುವ ವರ್ಷಗಳು ಅಥವಾ 5 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು |
| (ಋ) | ವಿಧವೆಯಾಗಿದ್ದಲ್ಲಿ (ಅಭ್ಯರ್ಥಿಯು ಸಕ್ಷಮ ಪ್ರಾಧಿಕಾರದಿಂದ ತಾನು ವಿಧವೆಯೆಂದು ಹಾಗೂ ಮರು ಮದುವೆಯಾಗಿರುವುದಿಲ್ಲವೆಂಬ ಪ್ರಮಾಣ ಪತ್ರ). | 10 ವರ್ಷಗಳು |
| (ಋ) | ಜೀತ ಕಾರ್ಮಿಕನಾಗಿದ್ದ ಪಕ್ಷದಲ್ಲಿ ಸದರಿ ಅಧಿನಿಯಮ ಅಥವಾ 1957ರ ಕರ್ನಾಟಕ ಜೀತ ಕಾರ್ಮಿಕ ಪದ್ಧತಿ (ರದ್ದಿಯಾತಿ) ಆದೇಶದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಹೊಣೆಯಿಂದ ಬಿಡುಗಡೆಯಾಗಿದ್ದಾನೆಂದು ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್ ರಿಂದ ಪಡೆದ ಪ್ರಮಾಣ ಪತ್ರ | 10 ವರ್ಷಗಳು |

**7. <u>ಅರ್ಜಿಗಳ ಸೂಕ್ಷ್ಮ ಪರಿಶೀಲನೆ</u> :-**

ಈ ಹುದ್ದೆಗಳಿಗೆ ಅರ್ಜಿಯೊಂದಿಗೆ ಸಲ್ಲಿಸುವ ಲಗತ್ತುಗಳ ಆಧಾರದ ಮೇಲೆ ಮಾತ್ರವೇ ದಾಖಲೆಗಳ ಪರಿಶೀಲನೆ ಮಾಡಲಾಗುವುದು, ಅವಶ್ಯಕ ಸಂದರ್ಭಗಳಲ್ಲಿ ಜಿಲ್ಲಾ ಪಂಚಾಯಿತಿಯು ಮೂಲ ದಾಖಲೆಗಳ ಪರಿಶೀಲನೆಯನ್ನು ನಡೆಸಲು ತೀರ್ಮಾನಿಸಿದಲ್ಲಿ ಅರ್ಜಿಯೊಂದಿಗೆ ಲಗತ್ತಿಸಿರುವ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು, ಏನೇ ಸಂದರ್ಭವಿದ್ದರೂ ವಯೋಮಿತಿ, ವಿದ್ಯಾರ್ಹತೆ ಮತ್ತು ಮೀಸಲಾತಿಗಳಿಗೆ ಸಂಬಂಧಿಸಿದಂತೆ ಅರ್ಜಿಯನ್ನು ಸಲ್ಲಿಸುವ ಸಂದರ್ಭದಲ್ಲಿ ಲಗತ್ತು ಮಾಡಲಾದ ಪ್ರಮಾಣ ಪತ್ರಗಳನ್ನೇ ಅಂತಿಮವೆಂದು ತೀರ್ಮಾನಿಸಲಾಗುತ್ತದೆ. ಆದ್ದರಿಂದ ಅಭ್ಯರ್ಥಿಗಳು ಜಾಗರೂಕತೆಯಿಂದ ತಮಗೆ ಅನ್ವಯಿಸುವ ಎಲ್ಲಾ ದಾಖಲೆಗಳನ್ನು ಸಲ್ಲಿಸುವುದು.

**ಆದ್ದರಿಂದ ಈ ಕೆಳಕಂಡ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಕಡ್ಡಾಯವಾಗಿ ಪಡೆದಿಟ್ಟುಕೊಂಡು ಅರ್ಜಿಯೊಂದಿಗೆ ಲಗತ್ತು ಮಾಡಬೇಕು ತಪ್ಪಿದ್ದಲ್ಲಿ ಅವರ ಮೀಸಲಾತಿ ಅಭ್ಯರ್ಥಿತ್ವವನ್ನು ಪರಿಗಣಿಸಲಾಗುವುದಿಲ್ಲ.**

1. ಹುದ್ದೆಗೆ ನಿಗಧಿಪಡಿಸಲಾದ ವಿದ್ಯಾರ್ಹತೆಯನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿರುವ ಬಗ್ಗೆ ವಿದ್ಯಾರ್ಹತೆಯ ಪ್ರಮಾಣ ಪತ್ರಗಳು/ಎಲ್ಲಾ ವರ್ಷಗಳ ಅಂಕಪಟ್ಟಿಗಳು ಹಾಗೂ ಅಭ್ಯರ್ಥಿಗಳು ತಮಗೆ ಅನ್ವಯಿಸುವ ನಿಗದಿಪಡಿಸಿದ ವಿದ್ಯಾರ್ಹತೆಯನ್ನು ಪೂರ್ಣಗೊಳಿಸಿರುವ ಬಗ್ಗೆ ಸಂಬಂಧಿತ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರವನ್ನು ಅರ್ಜಿಯೊಂದಿಗೆ ಲಗತ್ತು ಮಾಡುವುದು ಕಡ್ಡಾಯವಾಗಿರುತ್ತದೆ.

2. ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಅಂಕಪಟ್ಟಿ ಎಸ್.ಎಸ್.ಎಲ್.ಸಿ ವರ್ಗಾವಣೆಯ ಪ್ರಮಾಣ ಪತ್ರ/ ಜನ್ಮ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ (Extract of cumulative record).
3. ಸೈನಿಕ ಸೇವೆಯಿಂದ ಬಿಡುಗಡೆಯಾದ/ ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ (ಪೂರ್ಣವಾಗಿ) (Discharge certificate) ಮತ್ತು ಪೆನ್ಷನ್ ಪಡೆಯುತ್ತಿರುವ ದಾಖಲೆಯ ಪ್ರತಿ ಮಾಜಿ ಸೈನಿಕರ ಅವಲಂಬಿತರಾಗಿದ್ದಲ್ಲಿ, ಮಾಜಿ ಸೈನಿಕರು ಸೇವೆಯಲ್ಲಿರುವಾಗ ಯುದ್ಧ|ಯುದ್ಧದಂತಹ ಕಾರ್ಯಾಚರಣೆಯಲ್ಲಿ ಮಡಿದ ಅಥವಾ ಅಂಗವಿಕಲತೆ ಹೊಂದಿದ ಬಗ್ಗೆ ಪ್ರಮಾಣ ಪತ್ರ (Dependant certificate) (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ).
4. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ, 3ಬಿ ಮಿಸಲಾತಿ ಅಭ್ಯರ್ಥಿಗಳು ನಮೂನೆ ಡಿ/ಇ/ಎಫ್ ನಲ್ಲಿ ತಹಶೀಲ್ದಾರ್‌ರಿಂದ ಪಡೆದ ಪ್ರಮಾಣ ಪತ್ರ(ಮೀಸಲಾತಿ ಕೋರಿದಲ್ಲಿ) ವನ್ನು ಅರ್ಜಿಯೊಂದಿಗೆ ಸಲ್ಲಿಸತಕ್ಕದ್ದು.
5. ಸಾಮಾನ್ಯ ಅರ್ಹತೆ ಅಭ್ಯರ್ಥಿಗಳು ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-1 ಮತ್ತು 2 ರಲ್ಲಿ/ ಇತರೆ ಅಭ್ಯರ್ಥಿಗಳು ನಮೂನೆ-2 (ಮೀಸಲಾತಿ ಕೋರಿದ್ದಲ್ಲಿ) ಯನ್ನು ಅರ್ಜಿಯೊಂದಿಗೆ ಸಲ್ಲಿಸತಕ್ಕದ್ದು.
6. ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ) ವನ್ನು ಅರ್ಜಿಯೊಂದಿಗೆ ಸಲ್ಲಿಸತಕ್ಕದ್ದು.
7. ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ) ವನ್ನು ಅರ್ಜಿಯೊಂದಿಗೆ ಸಲ್ಲಿಸತಕ್ಕದ್ದು.

7.1 ಮೀಸಲಾತಿ ಪ್ರಮಾಣ ಪತ್ರಗಳು:-

<table>
<tr><td rowspan="5">(1)<br>ಜಾತಿ/ಮೀಸಲಾತಿ ಪ್ರಮಾಣ ಪತ್ರಗಳು</td><td colspan="2">ಮೀಸಲಾತಿ ಪ್ರಮಾಣ ಪತ್ರಗಳನ್ನು ಸಲ್ಲಿಸಬೇಕಾದ ನಮೂನೆಗಳು:-</td></tr>
<tr><td>ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು</td><td>ನಮೂನೆ `ಡಿ'</td></tr>
<tr><td>ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳು</td><td>ನಮೂನೆ `ಇ</td></tr>
<tr><td>ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು</td><td>ನಮೂನೆ `ಎಫ್'</td></tr>
<tr><td colspan="2">ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ<br>ಹಿಂದುಳಿದ ವರ್ಗಗಳ ಪ್ರವರ್ಗ-2(ಎ), ಪ್ರವರ್ಗ-2(ಬಿ), ಪ್ರವರ್ಗ-3(ಎ) ಮತ್ತು ಪ್ರವರ್ಗ-3(ಬಿ) ಮೀಸಲಾತಿ ಪ್ರಮಾಣ ಪತ್ರಗಳು 05 ವರ್ಷ ಚಾಲ್ತಿಯಲ್ಲಿರುತ್ತವೆ (Government Notification No SWD 155 BCA 2012 Dt: 17-02-2012 ರನ್ವಯ), ಅಭ್ಯರ್ಥಿಗಳು ಪಡೆದಿರುವ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಪಡೆದಿಟ್ಟುಕೊಂಡು ಅರ್ಜಿ ಸಲ್ಲಿಸುವಾಗ ಲಗತ್ತು ಮಾಡತಕ್ಕದ್ದು. ಪ.ಜಾ/ಪ.ಪಂ/ಪ್ರ.1 ರ ಅಭ್ಯರ್ಥಿಗಳು ಪಡೆದಿರುವ/ಪಡೆಯುವ ಪ್ರಮಾಣ ಪತ್ರಗಳು ಜೀವಿತ ಅವಧಿಯವರೆಗೆ ಅಥವಾ ರದ್ದು ಮಾಡುವವರೆವಿಗೆ ಸಿಂಧುತ್ವವನ್ನು ಹೊಂದಿದ್ದು, ಇಂತಹ ಪ್ರಮಾಣ ಪತ್ರಗಳನ್ನು ದಿನಾಂಕದ ಮಿತಿಯಿಲ್ಲದೇ ಪರಿಗಣಿಸಲಾಗುವುದು (ಸರ್ಕಾರದ ಸುತ್ತೋಲೆ ಸಂಖ್ಯೆ, SWD 155 BCA 2011 ದಿನಾಂಕ: 22-02-2012)</td></tr>
</table>

| | |
|---|---|
| | ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 08 ಸೇನೆನಿ 2001 ದಿನಾಂಕ:13-02-2001 ರನ್ವಯ ಗ್ರಾಮೀಣಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ.. ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. |
| (2) ಗ್ರಾಮೀಣ ಅಭ್ಯರ್ಥಿ ಗಳಿಗೆ ಮೀಸಲಾತಿ | ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ-2ನ್ನು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಹಾಗೂ ಈ ಪ್ರಮಾಣ ಪತ್ರವಲ್ಲದೇ ಮೇಲುಸ್ಮರಕೆ (Creamy layer) ಸೇರಿಲ್ಲದಿರುವ ಬಗ್ಗೆ ನಮೂನೆ-1 ರಲ್ಲಿ, ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್ ರವರಿಂದ ಪಡೆದಿಟ್ಟುಕೊಂಡಿರತಕ್ಕದ್ದು (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ). ನಮೂನೆ-1 ರಲ್ಲಿ ಪಡೆದಿರುವ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರತಕ್ಕದ್ದು ಹಾಗೂ ಅಭ್ಯರ್ಥಿಗಳು ತಮಗೆ ಸಂಬಂಧಿಸಿದ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸುವಾಗ ಲಗತ್ತಿಸುವುದು. |
| | ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2 ರಲ್ಲಿ ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜು,ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ನಿಗಧಿತ ನಮೂನೆಯಲ್ಲಿ ಅಪ್ಲೋಡ್ ಮಾಡತಕ್ಕದು. (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ). ತಪ್ಪಿದಲ್ಲಿ, ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು ಹಾಗೂ ಅಂತಹವರು ಗ್ರಾಮೀಣ ಮೀಸಲಾತಿಗೆ ಅನರ್ಹರಾಗುತ್ತಾರೆ. |
| | ಜಾತಿ ಹಾಗೂ ಗ್ರಾಮೀಣ ಮೀಸಲಾತಿ ಕೋರಿರುವ ಅಭ್ಯರ್ಥಿಗಳ ಜಾತಿ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತವಾದಲಿ, ಅಂತಹವರು ಗ್ರಾಮೀಣ ಮೀಸಲಾತಿಗೂ ಸಹ ಅನರ್ಹರಾಗುತ್ತಾರೆ |
| (3) ಕನ್ನಡ ಮಾಧ್ಯಮ ಅಭ್ಯರ್ಥಿಗಳಿಗೆ ಮೀಸಲಾತಿ | ಸರ್ಕಾರಿ ಅಧಿಸೂಚನೆ ಸಂಖ್ಯೆ: ಸಿಆಸುಇ 71 ಸೇನೆನಿ 2001 ದಿನಾಂಕ: 24-10-2002 ರನ್ವಯ ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ನಿಗದಿತ ನಮೂನೆಯಲ್ಲಿ ಪಡೆದಿಟ್ಟುಕೊಂಡು ಅರ್ಜಿ ಸಲ್ಲಿಸುವಾಗ ಲಗತ್ತು ಮಾಡತಕ್ಕದು.(ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ). |
| (4)ಮಾಜಿ ಸೈನಿಕರಿಗೆ ಮೀಸಲಾತಿ | ಮಾಜಿ ಸೈನಿಕ ಎಂದರೆ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲಿ (ಯೋಧ ಅಥವಾ ಯೋಧನಾಗಿಲ್ಲ ದೇ) ಸೇವೆ ಸಲ್ಲಿಸಿರುವ ವ್ಯಕ್ತಿ ಎಂದು ಅರ್ಥ ಆದರೆ ಡಿಫೆನ್ಸ್ ಸೆಕ್ಯುರಿಟಿ ಕೋ, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕ ಸಹಾಯಕ ಸೇನಾ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ |

| | |
|---|---|
| | ಸೇರ್ಪಡೆಯಾಗುವುದಿಲ್ಲ ಮತ್ತು<br>(ಅ) ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ<br>ಅಥವಾ<br>(ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಲ್ಲಿ ಬಿಡುಗಡೆಯಾದವರು<br>ಅಥವಾ<br>(ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ<br>ಅಥವಾ<br>(ಈ) ತನ್ನ ಸ್ವಂತ ಕೋರಿಕೆಯ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯ ಕಾರಣದಿಂದಾಗಿತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ, ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು.<br>(i) ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು,<br>(ii) ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ,<br>(iii) ಗ್ಯಾರಂಟಿ ಪ್ರಶಸ್ತಿ ವಿಜೇತರು.<br>**ವಿವರಣೆ** :- ಕೇಂದ್ರ ಸಶಸ್ತ್ರದಳದ ಸೇವೆಯಲ್ಲಿ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ, ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ ಸೇವೆ ಅಥವಾ ಹುದ್ದೆಗಳಿಗೆ ನೇಮಕ ಹೊಂದುವಂತಿಲ್ಲ. ಸೈನಿಕರ ಸೇವಾ ಒಪ್ಪಂದದ ಮುಕ್ತಾಯಕ್ಕೆ ಮುನ್ನ ಅರ್ಜಿ ಸಲಿಸುವ ಅಭ್ಯರ್ಥಿಗಳು ಅವರ ಮೇಲಾಧಿಕಾರಿಗಳಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಪಡೆದು ಅದರ ಮೂಲ ಪ್ರತಿಯನ್ನು ಅರ್ಜಿ ಸಲ್ಲಿಸುವಾಗ ಲಗತ್ತಿಸುವುದು. |
| | 2) ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಯುದ್ಧ ಯುದ್ಧದಂತಹ ಕಾರ್ಯಾಚರಣೆಯಲಿ ಮಡಿದ ಅಥವಾ ಅಂಗವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ. |
| | 3) ಸೇನೆಯಿಂದ ಬಿಡುಗಡೆಯಾದ ವ್ಯಕ್ತಿಗಳು ಅವರ ಬಿಡುಗಡೆ ಪ್ರಮಾಣ ಪತ್ರವನ್ನು (ಗುರುತಿನ |

| | |
|---|---|
| | ಚೀಟಿ, ನಿವೃತ್ತಿ ವೇತನ ಸಂದಾಯದ ಪತ್ರ, ಬಿಡುಗಡೆ ಪುಸ್ತಕ ಮತ್ತು ಪದವಿ ಪ್ರಮಾಣ ಪತ್ರ) (ಮಾಜಿ ಸೈನಿಕರ ಅವಲಂಬಿತರು ಮಾಜಿ ಸೈನಿಕರು ಸೇವೆಯಲ್ಲಿದ್ದಾಗ ಯುದ್ಧ/ಯುದ್ಧದಂತಹ ಕಾರ್ಯಾಚರಣೆಯಲ್ಲಿ ಮಡಿದ ಅಥವಾ ಶಾಶ್ವತ ಅಂಗವಿಕಲತೆ ಹೊಂದಿದ ಬಗ್ಗೆ ಪ್ರಮಾಣ ಪತ್ರ. |
| | 4)ಮಾಜಿ ಸೈನಿಕರ ಅವಲಂಬಿತರು ಮಾಜಿ ಸೈನಿಕರು ಸೇವೆಯಲ್ಲಿದ್ದಾಗ ಯುದ್ಧ/ ಯುದ್ಧದಂತಹ ಕಾರ್ಯಾಚರಣೆಯಲ್ಲಿ ಮಡಿದ ಅಥವಾ ಶಾಶ್ವತ ಅಂಗವಿಕಲತೆ ಹೊಂದಿದ ಬಗ್ಗೆ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ. |
| (5) ಅಂಗವಿಕಲ ಅಭ್ಯರ್ಥಿ | ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 149 ಎಸ್ ಆರ್ ಆರ್ 2020 ದಿನಾಂಕ 25-09-2020 ರಲ್ಲಿ ರಾಜ್ಯ ಸಿವಿಲ್ ಸೇವೆಗಳ ಸಮೂಹ ಎ' ಮತ್ತು `ಬಿ' ಗುಂಪಿನ ಹುದ್ದೆಗಳಿಗೆ ಶೇಕಡ 4 ರಷ್ಟು ಮತ್ತು ಗ್ರೂಪ್-'ಸಿ' ಹುದ್ದೆಗಳಿಗೆ ಶೇಕಡ 5 ರಷ್ಟು ಅಂಗವಿಕಲರಿಗೆ ಮೀಸಲಾತಿ ಕಲ್ಪಿಸಿದ್ದು, ಇದರನ್ವಯ ಶೇಕಡ 40 ಕ್ಕಿಂತ ಕಡಿಮೆ ಇಲ್ಲದಂತಹ ಅಂಗವಿಕಲತೆಯುಳ್ಳ, ಅಭ್ಯರ್ಥಿಗಳು ಮಾತ್ರ ಈ ಮೀಸಲಾತಿಯನ್ನು ಕೋರಲು ಅರ್ಹರು, ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ ಸಿಆಸುಇ 115 ಸೇನೆನಿ 2005 ದಿನಾಂಕ: 19-11-2005 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ: ಮಮಇ 65 ಪಿ ಹೆಚ್ ಪಿ 2010 ದಿನಾಂಕ:18-02-2011 ರಂತೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿಯ ವೈದ್ಯಕೀಯ ಪ್ರಾಧಿಕಾರ/ತಾಲೂಕು ಮಟ್ಟದ ವೈದ್ಯಕೀಯ ಪ್ರಾಧಿಕಾರ ಇವರಿಂದ ಪ್ರಮಾಣ ಪತ್ರವನ್ನು ನಿಗಧಿಪಡಿಸಿದ ದಿನಾಂಕದೊಳಗೆ ಪಡೆದಿಟ್ಟುಕೊಂಡು ಅರ್ಜಿ ಸಲ್ಲಿಸುವಾಗ ಲಗತ್ತಿಸುವುದು. ತಪ್ಪಿದಲ್ಲಿ, ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ). ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು/ಗುರುತಿನ ಚೀಟಿಯ ಪ್ರತಿಗಳನ್ನು ಪರಿಗಣಿಸಲು ಬರುವುದಿಲ್ಲ.<br>ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 272 ಸೇನೆನಿ 2013 ದಿನಾಂಕ:11-02-2021 ರನ್ವಯ ಎದ್ದು ಕಾಣುವ ಅಂಗವಿಕಲತೆ (Benchmark Disabilities) ಅಥವಾ ನಿರ್ದಿಷ್ಟಪಡಿಸಿದ ಅಂಗವಿಕಲತೆ (Specified Disabilities) ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಸಮಯದಲ್ಲಿ ಅಂಗವಿಕಲತೆಯ ಸಂಬಂಧಿಸಿದ ಮೀಸಲಾತಿಯನ್ನು ಕೋರಿ ಅಂಗವಿಕಲತೆಯ ಪ್ರಮಾಣ ಪತ್ರವನ್ನು ಲಗತ್ತಿಸುವುದು |

**8. ವಿಶೇಷ ಸೂಚನೆಗಳು :-**

ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಹುದ್ದೆಗೆ ನಿಗದಿಪಡಿಸಿದ ವಿದ್ಯಾರ್ಹತೆಯ ಪ್ರಮಾಣ ಪತ್ರ, ವಯೋಮಿತಿಗೆ ಸಂಬಂಧಿಸಿದಂತೆ ಪ್ರಮಾಣ ಪತ್ರ ಹಾಗೂ ಈ ಮೇಲ್ಕಂಡ ಮೀಸಲಾತಿಗಳನ್ನು ಕೋರುವ ಎಲ್ಲಾ ಅಭ್ಯರ್ಥಿಗಳು ಸಂಬಂಧಿಸಿದ ಪ್ರಮಾಣ ಪತ್ರಗಳನ್ನು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಪಡೆದಿಟ್ಟುಕೊಂಡು ಅರ್ಜಿಯೊಂದಿಗೆ ಕಡ್ಡಾಯವಾಗಿ ಲಗತ್ತು ಮಾಡತಕ್ಕದ್ದು.

1. ಅಭ್ಯರ್ಥಿಗಳು ತಮಗೆ ಅನ್ವಯಿಸುವ ಮೀಸಲಾತಿಗಳನ್ನು ಅರ್ಜಿ ಸಲ್ಲಿಸುವ ಸಮಯದ ಕೋರತಕ್ಕದ್ದು (claim) ಹಾಗೂ ಈ ಸಂಬಂಧ ಸದರಿ ಪ್ರಮಾಣ ಪತ್ರಗಳನ್ನು ತಪ್ಪದೇ ಅರ್ಜಿಯೊಂದಿಗೆ

ಲಗತ್ತು ಮಾಡತಕ್ಕದ್ದು ಈ ಎರಡೂ ಪ್ರಕ್ರಿಯೆಗಳು ಕಡ್ಡಾಯವಾಗಿದ್ದು, ತಪ್ಪಿದ್ದಲ್ಲಿ, ಅಂತಹ ಮೀಸಲಾತಿಯನ್ನು ತಿರಸ್ಕರಿಸಲಾಗುವುದು, ಈ ಸಂಬಂಧ ತದನಂತರ ಸಲ್ಲಿಸುವ ಯಾವುದೇ ಮನವಿಗಳನ್ನು ಪರಿಗಣಿಸಲಾಗುವುದಿಲ್ಲ.

2. ಅಭ್ಯರ್ಥಿಗಳು ಕೋರುವ ವಿವಿಧ ಮೀಸಲಾತಿಗಳಿಗೆ ಸಂಬಂಧಿಸಿದಂತೆ ತಮ್ಮ ಹೆಸರಿನಲ್ಲಿಯೇ ಎಲ್ಲಾ ಪ್ರಮಾಣ ಪತ್ರಗಳನ್ನು ಪಡೆದಿಟ್ಟುಕೊಂಡಿದ್ದು, ಜಿಲ್ಲಾ ಪಂಚಾಯಿತಿ ಕೋರಿದಾಗ ಹಾಗೂ ಮೂಲ ದಾಖಲೆಗಳ ಪರಿಶೀಲನಾ ಸಮಯದಲ್ಲಿ ಹಾಜರುಪಡಿಸತಕ್ಕದ್ದು, ತಪ್ಪಿದ್ದಲ್ಲಿ ಅಂತಹ ಮೀಸಲಾತಿಗಳನ್ನು ತಿರಸ್ಕರಿಸಲಾಗುವುದು.
3. ಮೀಸಲಾತಿ ಪ್ರಮಾಣ ಪತ್ರಗಳ ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ.
4. ಇತರೆ ನಮೂನೆಗಳಲ್ಲಿ ಸಲ್ಲಿಸಲ್ಪಡುವ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.
5. ಫೋಟೋ ಮತ್ತು ಸಹಿಯನ್ನು/ದಾಖಲೆಗಳನ್ನು ಅರ್ಜಿಯಲ್ಲಿ ನಮೂಧಿಸದೆ ಅಪೂರ್ಣವಾಗಿರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
6. ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಫೋಟೋ ಪ್ರತಿಯನ್ನು ಕಡ್ಡಾಯವಾಗಿ ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ. ಜಿಲ್ಲಾ ಪಂಚಾಯಿತಿ ಯಾವುದೇ ಕಾರಣಕ್ಕೂ ಅರ್ಜಿಯ ಪ್ರತಿಯನ್ನು ಒದಗಿಸಲಾಗುವುದಿಲ್ಲ.
7. ಹುದ್ದೆಗಳಿಗೆ ನಿಗಧಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ, ಮೀಸಲಾತಿ, ಇತ್ಯಾದಿಗಳಿಗನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ. ತಪ್ಪು ಮಾಹಿತಿ ನೀಡಿದಲ್ಲಿ ಅಂತಹ ಅಭ್ಯರ್ಥಿಗಳ ವಿರುದ್ಧ ಜಿಲ್ಲಾ ಪಂಚಾಯಿತಿಯಿಂದ/ಗ್ರಾಮ ಪಂಚಾಯಿತಿಯಿಂದ ಕ್ರಿಮಿನಲ್ ಮೊಕ್ಕದ್ದಮೆ ಹೂಡಲಾಗುವುದು, ಆದುದರಿಂದ, ಅರ್ಜಿ ಸಲ್ಲಿಸುವ ಮುನ್ನ ಅಭ್ಯರ್ಥಿಗಳು ನೀಡಿರುವ ಎಲ್ಲಾ ಮಾಹಿತಿಯು ಸರಿಯಾಗಿದೆ ಎಂದು ಖಚಿತಪಡಿಸಿಕೊಂಡು ದೃಢೀಕರಣ ನೀಡುವಾಗ ಎಚ್ಚರ ವಹಿಸಬೇಕು.

ಪ್ರಮುಖ ಸೂಚನೆ: **ಸದರಿ ಅಧಿಸೂಚನೆಯಲ್ಲಿನ ವಿವರಗಳಿಗೆ ಸಂಬಂಧಿಸಿದಂತೆ ಸರ್ಕಾರ/ ಇಲಾಖೆಯಿಂದ ಯಾವುದಾರೂ ತಿದ್ದುಪಡಿ/ಬದಲಾವಣೆ ಸ್ವೀಕೃತವಾದಲ್ಲಿ ಅದರಂತೆ ತಿದ್ದುಪಡಿಗಳನ್ನು ನಂತರದಲ್ಲಿ ಪ್ರಕಟಿಸಲಾಗುವುದು.**

**9. ಜಿಲ್ಲಾ ಪಂಚಾಯಿತಿದೊಡನೆ ಪತ್ರ ವ್ಯವಹಾರ:-**

- ಜಿಲ್ಲಾ ಪಂಚಾಯಿತಿಯು ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ. ವಿಳಾಸ ಬದಲಾವಣೆ ಇದ್ದಲ್ಲಿ ಅಭ್ಯರ್ಥಿಗಳು ಲಿಖಿತ ಮನವಿಯ ಮೂಲಕ ಜಿಲ್ಲಾ ಪಂಚಾಯಿತಿ ಗಮನಕ್ಕೆ ತರತಕ್ಕದ್ದು. ಈ ವಿಳಾಸ ಬದಲಾವಣೆಯನ್ನು ಪರಿಗಣಿಸಲು ಜಿಲ್ಲಾ ಪಂಚಾಯಿತಿಯು ಪ್ರಯತ್ನಿಸುವುದು, ಆದಾಗ್ಯೂ ಈ ವಿಚಾರದಲ್ಲಿ ಜಿಲ್ಲಾ ಪಂಚಾಯಿತಿಯು ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ. ಈ ಬಗ್ಗೆ ಅಭ್ಯರ್ಥಿಗಳು ಎಚ್ಚರ ವಹಿಸತಕ್ಕದ್ದು. ಅಭ್ಯರ್ಥಿಗಳು ಜಿಲ್ಲಾ ಪಂಚಾಯಿತಿ ದೊಡನೆ ಸಂಪರ್ಕಿಸಲೇಬೇಕಾದ ಸಂದರ್ಭದಲ್ಲಿ ತಮ್ಮ ಮನವಿಯಲ್ಲಿ ಈ ಕೆಳಕಂಡ ಮಾಹಿತಿಗಳನ್ನು ಒದಗಿಸತಕ್ಕದ್ದು-

(i) ಹುದ್ದೆ / ವಿಷಯದ ಹೆಸರು/ನೋಂದಣಿ ಸಂಖ್ಯೆ

(ii) ಅಭ್ಯರ್ಥಿಯ ಪೂರ್ಣ ಹೆಸರು ಹಾಗೂ ಇ-ಮೇಲ್ ಐಡಿ

(iii) ಅರ್ಜಿಯಲ್ಲಿ ನಮೂದಿಸಿರುವ ಅಂಚೆ ವಿಳಾಸ

10. <u>ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆಗಳು:-</u>

ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯಿತಿ, ಕೋಲಾರ - 9480870001

ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯಿತಿ, ಕೋಲಾರ - 9916588015

11. ದುರ್ನಡತೆ:-

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಸಂದರ್ಶನದಲ್ಲಿ ಅನುಸೂಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅವನು/ಅವಳು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ, ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

ಉಪ ಕಾರ್ಯದರ್ಶಿ
**ಜಿಲ್ಲಾ ಪಂಚಾಯತ್, ಕೋಲಾರ ಹಾಗೂ**
**ಸದಸ್ಯ ಕಾರ್ಯದರ್ಶಿ ಗ್ರಾಮ ಪಂಚಾಯಿತಿ**
**ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರದ**
**ಮೇಲ್ವಿಚಾರಕರ ಆಯ್ಕೆ ಸಮಿತಿ,**
**ಕೋಲಾರ.**